# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ ಶಿವಾಜಿನಗರ ಉಪವಿಭಾಗ ಹಲಸೂರು ಕೆರೆರಸ್ತೆ, ಬೆಂಗಳೂರು-42**

---

ಸಂಖ್ಯೆ:ಸ.ಇಂ/ವಾ-91/ವಾರ್ಡ್‌ಸಭೆ/07 /2020-21 ದಿನಾಂಕ:02-01-2021

## ವಾರ್ಡ್-91 ರ ವಾರ್ಡ್ ಸಭೆಯ ನಡವಳಿ

ದಿನಾಂಕ: 02/01/2021 ರಂದು ಶಿವಾಜಿನಗರ ಉಪ ವಿಭಾಗ ವಾರ್ಡ್-91, ಭಾರತಿನಗರ ವಾರ್ಡ್ ಕಛೇರಿಯಲ್ಲಿ ಶ್ರೀ.ರವಿ. ವಾರ್ಡ್-91 ರ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳಿ.

**ಹಾಜರಿದ್ದವರು:**

| ಕ್ರಮ ಸಂಖ್ಯೆ | ಸದಸ್ಯರ ಹೆಸರು | ಪದನಾಮ / ಇಲಾಖೆ |
|---|---|---|
| 1 | ಶ್ರೀ ರವಿ | ಸಹಾಯಕ ನಿಯಂತ್ರಕರು (ಹಣಕಾಸು-ದಕ್ಷಿಣ) ಹಾಗೂ ನೋಡಲ್ ಅಧಿಕಾರಿ ವಾರ್ಡ್-91 |
| 2 | ಶ್ರೀ ಸೈಫುದ್ದಿನ್, | ಸಕಾನಿಅ ಶಿವಾಜಿನಗರ ಉಪ ವಿಭಾಗ |
| 3 | ಶ್ರೀ ನವೀನ್ | ಆರೋಗ್ಯ ವೈದ್ಯಾಧಿಕಾರಿ, ಶಿವಾಜಿನಗರ ವಲಯ |
| 4 | ಶ್ರೀ ಶಿವಕುಮಾರ್, | ಸ.ಕ.ಅ(ಶಿವಾಜಿನಗರ) |
| 5 | ಶ್ರೀ ಪ್ರವೀಣ್.ಎನ್.ಎಂ, | ಸಅ ಹಾಗೂ ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್ ಸಂಖ್ಯೆ:91 |
| 6 | ಶ್ರೀ ನಿರಂಜನ್, | ಸಕಾನಿಅ(ಘ.ತ್ಯಾ.ನಿ) ಶಿವಾಜಿನಗರ ವಿಭಾಗ (ಪ್ರಭಾರೆ) |
| 7 | ಶ್ರೀ ಸತೀಶ್, | ಕಂದಾಯ ಪರಿವೀಕ್ಷಕರು |
| 8 | ಶ್ರೀ ರಾಜೇಶ್, | ಸ.ಅ(ಬಿ.ಡಬ್ಲ್ಯೂ.ಎಸ್.ಎಸ್.ಬಿ) |
| 9 | ಶ್ರೀ ಲಕ್ಷ್ಮಣ್, | ಸ.ಅ(ಬೆಸ್ಕಾಂ) |
| 10 | ಶ್ರೀ ಡೆನ್ಸಿಲ್, | ಗುತ್ತಿಗೆ ಕಿರಿಯ ಆರೋಗ್ಯ ಪರಿವೀಕ್ಷಕರು |

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಅಧಿಕಾರಿಗಳ / ಹಾಜರಿದ್ದವರ ಪರಸ್ಪರ ಪರಿಚಯದೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

1) **ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:** ಶಿವಾಜಿನಗರ ಉಪ ವಿಭಾಗದ ವಾರ್ಡ್ ಸಂಖ್ಯೆ:91ರ ವ್ಯಾಪ್ತಿಯಲ್ಲಿ ಸಾರ್ವಜನಿಕರ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳು ಕೋವಿಡ್ ಪರೀಕ್ಷೆಯ ವಿವರಗಳನ್ನು ಸಭೆಗೆ ಈ ಕೆಳಕಂಡಂತೆ ವಿವರಗಳನ್ನು ನೀಡಿದರು.

- ಕಡ್ಡಾಯವಾಗಿ ಮಾಸ್ಕ್ ಧರಿಸುವಂತೆ ಜನ ಜಾಗೃತಿ ಮೂಡಿಸಲು ಧ್ವನಿವರ್ಧಕವಿರು ಆಟೋಗಳಲ್ಲಿ ಸಾಯಂಕಾಲ 5 ರಿಂದ 7 ಗಂಟೆಯವರೆಗೆ ಜನನಿಬಿಡ ಪ್ರದೇಶಗಳಲ್ಲಿ ಪ್ರಚಾರ ಮಾಡಲು ವ್ಯವಸ್ಥೆ ಮಾಡುವಂತೆ ಹಿರಿಯ ಆರೋಗ್ಯ ಪರಿವೀಕ್ಷಕರು ಮತ್ತು ಘನತ್ಯಾಜ್ಯದ ಗುತ್ತಿಗೆದಾರರಿಗೆ ಸೂಚಿಸಿದರು. ಜೊತೆಗೆ ಬೀದಿ ಬದಿಗಳಲ್ಲಿ ತಳ್ಳುವಗಾಡಿ & ಇತರ ವಾಣಿಜ್ಯ ಚಟುವಡಿಕೆದಾರರಿಗೆ ತ್ಯಾಜ್ಯವನ್ನು ಸೂಕ್ತವಾಗಿ ವಿಲೇವಾರಿ ಮಾಡುವಂತೆ ಜಾಗೃತಿ ಮೂಡಿಸಲು ಸೂಚಿಸಿದರು.

- ಮಾಸ್ಕ್ ದರಿಸದೇ ಸಾರ್ವಜನಿಕವಾಗಿ ಒಡಾಡುವವರಿಗೆ ಕಡ್ಡಾಯವಾಗಿ ನಿಯಮಾವಳಿಗಳನ್ವಯ ದಂಡ ವಿಧಿಸುವುದು & ಮಾಸ್ಕ್ ಧರಿಸುವಂತೆ ಹಾಗೂ ಸಾಮಾಜಿಕ ಅಂತರ ಕಾಪಾಡಿಕೊಳ್ಳುವಂತೆ ಮನವೊಲಿಸುವ ಕೆಲಸವನ್ನು ನಿರ್ವಹಿಸುವಂತೆ ಸೂಚಿಸಿದರು.

- ವಾರ್ಡಿನಲ್ಲಿ ಇರುವ ಕೋವಿಡ್ ರೋಗಿಗಳ ಮಾಹಿತಿಯನ್ನು ಪ್ರಾಥಮಿಕ ಆರೋಗ್ಯ ಕೇಂದ್ರದ ಪರವಾಗಿ ಹಾಜರಿದ್ದ ಸ್ಟಾಫ್ ನರ್ಸ್‌ರವರಿಂದ ಹಾಗೂ ಸಂಬಂಧಪಟ್ಟ ಆರೋಗ್ಯ ವೈದ್ಯಾಧಿಕಾರಿಗಳಂದ ಪಡೆಯಲಾಗಿದ್ದು, ಇದರ ಬಗ್ಗೆ ಮತ್ತಷ್ಟು ಜಾಗ್ರತೆವಹಿಸಲು ತಿಳಿಸಿರುತ್ತಾರೆ. ಅದರಂತೆ ಸಂಬಂಧಪಟ್ಟ ಅಧಿಕಾರಿ ಮತ್ತು ಸಿಬ್ಬಂದಿಗಳು ಇದರ ಬಗ್ಗೆ ಅವಶ್ಯ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿರುತ್ತಾರೆ.

Scanned with CamScanner

- ಅಧ್ಯಕ್ಷರು ಮಾತನಾಡಿ, ತಾತ್ಕಾಲಿಕ ಪರೀಕ್ಷಾ ಕೇಂದ್ರಗಳನ್ನು ಕ್ರಿಮಿಟೋರಿಯಂ ಸ್ಥಳದ ಜೊತೆಗೆ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವ ಸ್ಥಳಗಳಾದ ಪೊಲೀಸ್ ಠಾಣೆ ಹತ್ತಿರ, ತರಕಾರಿ ಅಂಗಡಿಗಳ ಸಮೀಪ, ಪೇಟೆ ಬೀದಿಗಳಂತಹ ಸ್ಥಳಗಳಲ್ಲಿ ಕ್ಯಾಂಪ್‌ಗಳನ್ನು ಹಮ್ಮಿಕೊಂಡು ಹೆಚ್ಚಿನ ಪರೀಕ್ಷೆ ನಡೆಸುವಂತೆ ಸೂಚಿಸಿದರು.

- ವಾರ್ಡ್ ಪ್ರದೇಶದ ರಸ್ತೆಗಳಲ್ಲಿ ಮತ್ತು ಪಾದಚಾರಿ ರಸ್ತೆಗಳಲ್ಲಿ ಮಣ್ಣು ಮತ್ತು ಅನುಪಯುಕ್ತ ಡೆಬ್ರೀಸ್‌ನ್ನು ರಾತ್ರಿ ಹೊತ್ತಿನಲ್ಲಿ ಸುರಿಯುತ್ತಿದ್ದು, ಇದರಿಂದ ಸಾರ್ವಜನಿಕರಿಗೆ ಹಾಗೂ ಪಾದಚಾರಿಗಳಿಗೆ ಓಡಾಡಲು ತುಂಬಾ ತೊಂದರೆಯುಂಟಾಗುತ್ತಿರುತ್ತದೆ, ಆದುದರಿಂದ ಸದರಿ ಮಣ್ಣು ಮತ್ತು ಅನುಪಯುಕ್ತ ಡೆಬ್ರೀಸನ್ನು ತೆರವುಗೊಳಸಲು ಅವಶ್ಯ ಕ್ರಮ ಕೈಗೊಳ್ಳಲು ಕೋರಿರುತ್ತಾರೆ. ಈ ಸಂಬಂಧ ಸಭೆಯಲ್ಲಿ ಹಾಜರಿದ್ದ ಸಹಾಯಕ ಕಾರ್ಯಪಾಲಕ ಅಭಿಯಂತರರು ಮಾತನಾಡುತ್ತಾ, ಸದರಿ ವಿಷಯದ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿರುತ್ತಾರೆ.

- ಹಾಗೂ ಎಲ್ಲಾ ಸದಸ್ಯರಿಗೆ ಕಲ್ಯಾಣ ಕಾರ್ಯಕ್ರಮಗಳು ಹಾಗೂ ಒಂಟಿ ಮನೆ ನಿರ್ಮಾಣ ಮಾಡಲು ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ, ಅಲ್ಪಸಂಖ್ಯಾತರು ಮತ್ತು ಹಿಂದುಳಿದ ವರ್ಗದವರಿಗೆ ಬಿಬಿಎಂಪಿ ವತಿಯಿಂದ ನೀಡುವ ವಿವಿಧ ಕಲ್ಯಾಣ ಯೋಜನೆಗಾಗಿ ಅರ್ಹ ಫಲಾನುಭವಿಗಳ ಪಟ್ಟಿಯನ್ನು ನೀಡಲು ಸೂಚಿಸಿದರು.

ಅಂತಿಮವಾಗಿ ಅಧ್ಯಕ್ಷರು ಮಾತನಾಡಿ ಸಕಾದಲ್ಲಿ ಸಾರ್ವಜನಿಕರ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಂಡು ಎಲ್ಲಾ ಇಲಾಖೆಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿದರು.

ಕಾರ್ಯದರ್ಶಿಯವರು ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಸಲಾಯಿತು.

| | |
|---|---|
| (ಪ್ರವೀಣ್.ಎಸ್.ಎಂ) | (ರವಿ) |
| ಸ.ಅ & ಕಾರ್ಯದರ್ಶಿ | ಸ.ನಿ(ಹ-ದ) & ನೋಡಲ್ ಅಧಿಕಾರಿ |
| ವಾರ್ಡ್-91, ಭಾರತೀನಗರ | ವಾರ್ಡ್-91, ಭಾರತಿನಗರ |

Scanned with CamScanner